**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 796 |
| ಸದಸ್ಯರ ಹೆಸರು | : | ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 19.08.2025 |
| ಉತ್ತರಿಸುವವರು | : | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬಳ್ಳಾರಿ ಜಿಲ್ಲೆ. ಸಂಡೂರು ತಾಲ್ಲೂಕಿನ ನಂದಿಹಳ್ಳಿಯಲ್ಲಿ ಸ್ಕೂಲ್ ಆಫ್ ಮೈನಿಂಗ್ ಕಾಲೇಜನ್ನು ಸ್ಥಾಪಿಸಲು 2021 ರಲ್ಲಿ ಘೋಷಿಸಿರುವುದು ನಿಜವೇ; ಹೌದಾದಲ್ಲಿ, ಈ ಕಾಲೇಜು ಸ್ಥಾಪನೆ ಬಗ್ಗೆ ಇಲ್ಲಿಯವರೆಗೆ ಆಗಿರುವ ಪ್ರಗತಿ ವಿವರಗಳೇನು: (ಮಾಹಿತಿ ಒದಗಿಸುವುದು) | ಬಳ್ಳಾರಿ ಜಿಲ್ಲೆ, ಸಂಡೂರು ತಾಲ್ಲೂಕಿನ ನಂದಿಹಳ್ಳಿಯಲ್ಲಿ ಸ್ಕೂಲ್ ಆಫ್ ಮೈನಿಂಗ್ ಕಾಲೇಜನ್ನು ಸ್ಥಾಪಿಸುವುದರ ಕುರಿತು ಈ ಹಿಂದೆ ಪ್ರಸ್ತಾವನೆ ಇದ್ದು, ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲು ಹಿರಿಯ ತಜ್ಞರ ಸಮಿತಿಯನ್ನು ರಚಿಸಲಾಗಿರುತ್ತದೆ. ಅದರಂತೆ ಸದರಿ ಸಮಿತಿಯು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದ್ದು, ಸದರಿ ವರದಿಯಲ್ಲಿ ಬಳ್ಳಾರಿ, ಕೊಪ್ಪಳ ಮತ್ತು ಬೆಂಗಳೂರು ಈ 03 ಸ್ಥಳಗಳಲ್ಲಿ ಸ್ಕೂಲ್ ಆಫ್ ಮೈನಿಂಗ್ ಕಾಲೇಜು ಸ್ಥಾಪಿಸುವುದರ ಕುರಿತು ಶಿಫಾರಸ್ಸು ಮಾಡಿರುತ್ತದೆ.<br>ಹಿರಿಯ ತಜ್ಞರ ಸಮಿತಿಯು ಸಲ್ಲಿಸಿರುವ ವರದಿಯನ್ನು ಅನುಷ್ಠಾನಗೊಳಿಸುವುದರ ಸಂಬಂಧ ಸರ್ಕಾರದ ಆದೇಶ ಸಂಖ್ಯೆ ಸಿಐ 81 ಎಂಎಂಎಂ 2021, ದಿನಾಂಕ:07.09.2022 ರಲ್ಲಿ ಸಮಿತಿಯನ್ನು ರಚಿಸಲಾಗಿದ್ದು, ಸದರಿ ಸಮಿತಿಯಿಂದ ವರದಿ ನಿರೀಕ್ಷಿಸಲಾಗುತ್ತಿದೆ.<br>ಅನುಷ್ಠಾನ ಸಮಿತಿ ರಚಿಸಲಾಗಿರುವ ಆದೇಶದ ಪ್ರತಿಯನ್ನು ಅನುಬಂಧದಲ್ಲಿ ಒದಗಿಸಿದೆ. |
| ಆ) | ಸಂಡೂರಿನಲ್ಲಿ ಸ್ಥಾಪಿಸಲಾಗುತ್ತಿರುವ ಈ ಕಾಲೇಜನ್ನು ಸ್ಥಳಾಂತರ ಮಾಡುತ್ತಿರುವುದು ನಿಜವೇ: ಹಾಗಿದ್ದಲ್ಲಿ, ಯಾವ ಕಾರಣದಿಂದ ಸಂಡೂರಿನಿಂದ ಸ್ಥಳಾಂತರ ಮಾಡಲಾಗುತ್ತಿದೆ: (ಮಾಹಿತಿ ಒದಗಿಸುವುದು) | ಸ್ಕೂಲ್ ಆಫ್ ಮೈನಿಂಗ್ ಕಾಲೇಜ ಅನ್ನು ಸ್ಥಾಪಿಸಲು ಸ್ಥಳದ ಆಯ್ಕೆ ಮಾಡುವ ಬಗ್ಗೆ ಅಂತಿಮ ನಿರ್ಣಯವಾಗಿರುವುದಿಲ್ಲ. ಆದ ಕಾರಣ ಸ್ಥಳಾಂತರ ಮಾಡುವ ಪ್ರಶ್ನೆ ಉದ್ಭವಿಸುವುದಿಲ್ಲ. |
| ಇ) | ಗಣಿಗಾರಿಕೆಗೆ ಹೆಸರುವಾಸಿಯಾದ ಹಾಗೂ ಹೆಚ್ಚಿನ ವೈಜ್ಞಾನಿಕ ಕಲಿಕೆಗೆ ಅವಕಾಶವಿರುವ ಬಳ್ಳಾರಿ ಜಿಲ್ಲೆಯಲ್ಲಿಯೇ ಈ ಕಾಲೇಜನ್ನು ಸ್ಥಾಪಿಸುವ ಕುರಿತು ಸರ್ಕಾರದ ನಿರ್ಧಾರವೇನು? (ವಿವರಗಳೊಂದಿಗೆ ಮಾಹಿತಿ ಒದಗಿಸುವುದು) | ಅನುಷ್ಠಾನ ಸಮಿತಿ ವರದಿಯನ್ನು ನಿರೀಕ್ಷಿಸಲಾಗಿದ್ದು, ಸದರಿ ಸಮಿತಿಯ ವರದಿಯನ್ವಯ ಮುಂದಿನ ಕ್ರಮ ಜರುಗಿಸಬೇಕಾಗಿದೆ. |

ಸಂಖ್ಯೆ: ಸಿಐ [redacted] ಎಂಎಂಎಂ 2025
157

(ಎಸ್.ಎಸ್. ಮಲ್ಲಿಕಾರ್ಜುನ್)
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಕರ್ನಾಟಕ ರಾಜ್ಯದಲ್ಲಿ School of Mining ಸ್ಥಾಪನೆ ಕುರಿತು ತಜ್ಞರ ಸಮಿತಿಯು ಸಲ್ಲಿಸಿರುವ ವರದಿಯ ಅನುಷ್ಠಾನಗೊಳಿಸಲು ಸಮಿತಿ ರಚಿಸುವ ಕುರಿತು.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ ಸಿಐ 81 ಎಂಎಂಎಂ 2021, ದಿ:08.07.2021
2) ತಜ್ಞರ ಸಮಿತಿಯು ಸಲ್ಲಿಸಿರುವ ವರದಿ ದಿನಾಂಕ: 20.07.2022

**ಪ್ರಸ್ತಾವನೆ:**

ಮೇಲೆ ಓದಲಾದ (1) ರ ಆದೇಶದಲ್ಲಿ ರಾಜ್ಯದ ಗಣಿಗಾರಿಕೆ ಕ್ಷೇತ್ರದ ಉನ್ನತಿಗಾಗಿ, ರಾಜ್ಯಕ್ಕೆ ಹೆಚ್ಚುಹೆಚ್ಚು ಮೈನಿಂಗ್ ಇಂಜಿನಿಯರ್‌ಗಳು, ಪರಿಸರ ಇಂಜಿನಿಯರ್‌ಗಳು, ಭೂವಿಜ್ಞಾನಿಗಳು ಮತ್ತು ಐಟಿ ವೃತ್ತಿಪರರು ಬೇಕಾಗುತ್ತಾರೆ. ಅಂತರ ರಾಷ್ಟ್ರೀಯ ಮಾನದಂಡಗಳ ಪ್ರಕಾರ ಗಣಿಗಾರಿಕೆ ವಲಯದ ನಿಯಂತ್ರಣವನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು, ಸಮರ್ಪಕವಾಗಿ ಬಲಪಡಿಸಬೇಕಾಗುತ್ತದೆ. ಈ ನಿಟ್ಟಿನಲ್ಲಿ ಕೆಳಕಂಡ ಉದ್ದೇಶಗಳಿಗಾಗಿ ರಾಜ್ಯ ಸರ್ಕಾರವು "ಸ್ಕೂಲ್ ಆಫ್ ಮೈನಿಂಗ್ ಸ್ಥಾಪಿಸಲು ಉದ್ದೇಶಿಸಿದೆ.

a) Mentor Institute) a) Advance Technical Courses for Mining Supervision, Mines Manager (First Class and Second Class Manager), Mines mate
b) Blasting and its techniques including deep drilling, core drilling, core sampling, data processing and analysis, Modern methods of Reserve/ Resource estimation
c) Advanced Surveying methods for surveyors
d) Mining methods Open cast mining and underground mining

ನಿರ್ದೇಶಕರ ಕಛೇರಿ
Office of the Director
Dept. of Mines & Geology
09 SEP 2022
4721395
ಬೆಂಗಳೂರು - 560001.
Bengaluru - 560001.

JDCMIT
DD Cpicy

ಮೇಲಿನ ಉದ್ದೇಶದ ಹಿನ್ನಲೆಯಲ್ಲಿ ರಾಜ್ಯದಲ್ಲಿ "School of Mining" ಅನ್ನು ಸ್ಥಾಪಿಸುವ ಕುರಿತಂತೆ ಅಗತ್ಯ ಸಲಹೆ / ಸೂಚನೆಗಳನ್ನು ಅಭಿಪ್ರಾಯದೊಂದಿಗೆ ವರದಿಯನ್ನು ಈ ಆದೇಶದ ದಿನಾಂಕದಿಂದ 03 ತಿಂಗಳ ಅವಧಿಯೊಳಗೆ ಸರ್ಕಾರಕ್ಕೆ ಸಲ್ಲಿಸಲು ತಜ್ಞರ / ಹಿರಿಯ ಅಧಿಕಾರಿ/ವಿಷಯ ತಜ್ಞರು/ ಪರಿಣಿತರನ್ನೊಳಗೊಂಡ ಸಮಿತಿಯನ್ನು ರಚಿಸಿ ಆದೇಶಿಸಲಾಗಿತ್ತು.

ಸದರಿ ತಜ್ಞರ ಸಮಿತಿಯು ಮೇಲೆ ಓದಲಾದ (2)ರಲ್ಲಿ ರಾಜ್ಯದಲ್ಲಿ "School of Mining" ಅನ್ನು ಸ್ಥಾಪಿಸುವ ಕುರಿತಂತೆ ಅಗತ್ಯ ಸಲಹೆ / ಸೂಚನೆಗಳನ್ನು ಅಭಿಪ್ರಾಯದೊಂದಿಗೆ ವರದಿಯನ್ನು Prof. H.P. Khincha, ex-Vice Chancellor, Vishweswaraiah Technical University ರವರು ದಿನಾಂಕ: 20.07.2022 ರಂದು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತಾರೆ. ಸದರಿ ವರದಿಯನ್ನು ಅನುಷ್ಠಾನಗೊಳಿಸಲು ಅನುಷ್ಠಾನ ಸಮಿತಿಯನ್ನು ರಚಿಸಲು ಸರ್ಕಾರವು ತೀರ್ಮಾನಿಸಿ ಕೆಳಕಂಡಂತೆ ಆದೇಶಿಸಿದೆ.

2137

**ಸರ್ಕಾರದ ಆದೇಶ ಸಂಖ್ಯೆ: ಸಿಐ 81 ಎಂಎಂಎಂ 2021,**
**ಬೆಂಗಳೂರು, ದಿನಾಂಕ: 07/09/2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ ರಾಜ್ಯದಲ್ಲಿ "School of Mining" ಅನ್ನು ಸ್ಥಾಪಿಸುವ ಕುರಿತಂತೆ ಅಗತ್ಯ ಸಲಹೆ / ಸೂಚನೆಗಳನ್ನು ಅಭಿಪ್ರಾಯದೊಂದಿಗೆ ----

.....2.

-ವರದಿಯನ್ನು Prof. H.P. Khincha, ex-Vice Chancellor, Vishweswaraiah Technical University ರವರು ದಿನಾಂಕ: 20.07.2022 ರಂದು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತಾರೆ. ಸದರಿ ವರದಿಯನ್ನು ಅನುಷ್ಠಾನಗೊಳಿಸಲು ಅನುಷ್ಠಾನ ಸಮಿತಿಯನ್ನು ಈ ಕೆಳಕಂಡ ತಜ್ಞರನ್ನೊಳಗೊಂಡಂತೆ ರಚಿಸಿ ಆದೇಶಿಸಲಾಗಿದೆ.

| | | |
|---|---|---|
| 01 | Prof. H.P. Khincha, ex-Vice Chancellor, Vishweswaraiah Technical University. | Chairman |
| 02 | Dr. Prabhakar, Sangurmath, Nominated Director, HGML | Member |
| 03 | Dr. Nandan Kumar J.V. Rtd Addl. Director, Karnataka State Audit and Accounts Department | Member |
| 04 | Director, Mines and Geology. | Member Secretary |

ಮೇಲಿನ ಸಮಿತಿಯು ನಿರ್ವಹಿಸುವ ಪ್ರತಿ ಸಭೆಯ ಶುಲ್ಕವು ಅಧ್ಯಕ್ಷರಿಗೆ ರೂ. 4000/- ಮತ್ತು ಸದಸ್ಯರುಗಳಿಗೆ ರೂ. 3000/- ನಿಗಧಿಗೊಳಿಸಲಾಗಿದ್ದು, ಸದರಿ ವೆಚ್ಚವನ್ನು 2022-23ನೇ ಸಾಲಿನ ಲೆಕ್ಕ ಶೀರ್ಷಿಕೆ ಸಂಖ್ಯೆ 2853-02-102-0-15 (059)ರಲ್ಲಿ ಭರಿಸುವುದು.

ಮುಂದುವರೆದು, ಸಭೆಯನ್ನು ಜರುಗಿಸಲು ಅಗತ್ಯವಿರುವ ಎಲ್ಲಾ ವ್ಯವಸ್ಥೆಯನ್ನು ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ ಇವರು ಒದಗಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಶಿವಪ್ರಕಾಶ್)
ಸರ್ಕಾರದ ಅಧೀನ ಕಾರ್ಯದರ್ಶಿ,
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ(ಗಣಿ)

**ಇವರಿಗೆ:**

1) ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
2) ಸಮಿತಿಯ ಅಧ್ಯಕ್ಷರು ಮತ್ತು ಎಲ್ಲಾ ಸದಸ್ಯರುಗಳಿಗೆ (ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ ಇವರ ಮೂಲಕ)
3) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾಸಸೌಧ, ಬೆಂಗಳೂರು
4) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು
6) ಸರ್ಕಾರದ ಜಂಟಿ ಕಾರ್ಯದರ್ಶಿ(ಗಣಿ), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ಬೆಂಗಳೂರು.
7) ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ